ಆ) ಉದ್ಭವಿಸುವುದಿಲ್ಲ.

ಇ) ಇಲ್ಲ

ಈ) ಉದ್ಭವಿಸುವುದಿಲ್ಲ.

ವಿಷಯ: ವಿಟ್ಲ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1355 (1926)

ಶ್ರೀ ರುಕ್ಮಯ್ಯ ಪೂಜಾರಿ (ವಿಟ್ಲ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ವಿಟ್ಲ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಉದ್ದೇಶ ಸರ್ಕಾರಕ್ಕಿದೆಯೇ ಹಾಗೂ ಇದರ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಇದ್ದರೆ ಯಾವಾಗ ಮಾಡಲಾಗುವುದು ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:ಪ್ರತಿ ತಾಲ್ಲೂಕಿನಲ್ಲಿ ಸರ್ಕಾರಿ ವಿದ್ಯಾರ್ಥಿನಿಲಯದ ಪ್ರಾರಂಭ.

ಚುಕ್ಕೆ ಗುರುತಿಲ್ಲ ಪ್ರಶ್ನೆ ಸಂಖ್ಯೆ 1356 (2008)

ಶ್ರೀ ನಾರಾಯಣರಾವ್ ಮನೋಹಳ್ಳಿ (ಬೀದರ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಪ್ರತಿ ತಾಲ್ಲೂಕು ಕೇಂದ್ರ ಸ್ಥಾನದಲ್ಲಿ ಸರ್ಕಾರಿ ಕಾಲೇಜು ವಿದ್ಯಾರ್ಥಿನಿಲಯಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

ಆ) ಹಾಗಿದ್ದಲ್ಲಿ, ಯಾವಾಗ ಕಾರ್ಯಗತಗೊಳಿಸಲಾಗುವುದು ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ:ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1358 (2010)

ಶ್ರೀ ನಾರಾಯಣರಾವ್ (ಬೀದರ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಪರಿಶಿಷ್ಟ ಜಾತಿ :ಪರಿಶಿಷ್ಟ ವರ್ಗ ವಿದ್ಯಾರ್ಥಿಗಳಿಗೆ ತಿಂಗಳಿಗೆ 200 ರೂ.ಗಳಂತೆ ಹಣ ಸಂದಾಯ ಮಾಡುವ ಬಗ್ಗೆ ಒಂದು ಸರ್ಕಾರದ ಆದೇಶವಿರುವುದು ನಿಜವೇ ?

ಆ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಅಂದರೆ 1989-90, 1990-91ಮತ್ತು 1991 92ರಲ್ಲಿ ವಿದ್ಯಾರ್ಥಿಗಳಿಗೆ ನೀಡಿರುವ ಹಣವೆಷ್ಟು ?

ಇ) ಈ ಹಣವನ್ನು ಭಾರತ ಸರ್ಕಾರದಿಂದ ಅಥವಾ ರಾಜ್ಯ ಸರ್ಕಾರದಿಂದ ಕೊಡಲಾಗುತ್ತಿದೆಯೇ ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು)

ಅ) ಹೌದು.